## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿಜಯನಗರ ಜಿಲ್ಲೆಯ ಹಡಗಲಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಅನುದಾನ ಮಂಜೂರು ಮಾಡುವ ಕುರಿತು.

**ಓದಲಾಗಿದೆ:** ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 523 ವೆಚ್ಚ-3/2022 ದಿನಾಂಕ:29.08.2022.***

******

ಪ್ರಸ್ತಾವನೆ:

ಮೇಲೆ ಓದಲಾದ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಯವರು ವಿಜಯನಗರ ಜಿಲ್ಲೆಯ ಹಡಗಲಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಸಮುದಾಯ ಭವನ ನಿರ್ಮಾಣಕ್ಕೆ ಈ ಕೆಳಕಂಡಂತೆ ಅನುದಾನ ಮಂಜೂರು ಮಾಡಲು ಆದೇಶಿಸಿದ್ದು, ಮಾನ್ಯ ಮುಖ್ಯಮಂತ್ರಿಯವರ ಆದೇಶದಂತೆ ಅನುದಾನ ಮಂಜೂರು ಮಾಡಲು ಕೂಡಲೇ ಅಗತ್ಯಕ್ರಮ ಕೈಗೊಳ್ಳುವಂತೆ ಕೋರಲಾಗಿರುತ್ತದೆ.

| ಕ್ರ. ಸಂ. | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1. | ಹಡಗಲಿ ತಾಲ್ಲೂಕು ಇಟ್ಟಗಿ ಗ್ರಾಮದ ಶ್ರೀ ಕೋಟೆ ಬಸವೇಶ್ವರ ಸಮುದಾಯ ಭವನ ಅಪೂರ್ಣಗೊಂಡ ಕಾಮಗಾರಿ ಪೂರ್ಣಗೊಳಿಸುವುದು. | 20.00 |
| 2. | ಹಡಗಲಿ ತಾಲ್ಲೂಕು ಇಟ್ಟಗಿ ಗ್ರಾಮದ ಶ್ರೀ ಕಲ್ಲೇಶ್ವರ ಸಮುದಾಯ ಭವನ ನಿರ್ಮಾಣ | 20.00 |
| 3. | ಹಡಗಲಿ ಪಟ್ಟಣದಲ್ಲಿ ಶ್ರೀ ಅಂಬಿರ ಚೌಡಯ್ಯ ಸಮುದಾಯ ಭವನ ನಿರ್ಮಾಣ | 25.00 |
| | ಒಟ್ಟು | **65.00** |

ಮೇಲ್ಕಂಡ ಮಾಹಿತಿಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 502 ಬಿಎಂಎಸ್ 2022**

**ಬೆಂಗಳೂರು, ದಿನಾಂಕ:- 28.10.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ವಿಜಯನಗರ ಜಿಲ್ಲೆಯ ಹಡಗಲಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ವಿವಿಧ ಸಂಘ-ಸಂಸ್ಥೆಗಳಿಗೆ ರೂ.65.00 ಲಕ್ಷ (ಅರುವತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನದಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ನಿಗದಿತ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ. ಸಂ. | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1. | ಹಡಗಲಿ ತಾಲ್ಲೂಕು ಇಟ್ಟಗಿ ಗ್ರಾಮದ ಶ್ರೀ ಕೋಟೆ ಬಸವೇಶ್ವರ ಸಮುದಾಯ ಭವನ ಅಪೂರ್ಣಗೊಂಡ ಕಾಮಗಾರಿ ಪೂರ್ಣಗೊಳಿಸುವುದು. | 20.00 |

..2..

28/10/22

| | | |
|---|---|---|
| 2. | ಹಡಗಲಿ ತಾಲ್ಲೂಕು ಇಟ್ಟಗಿ ಗ್ರಾಮದ ಶ್ರೀ ಕಲ್ಲೇಶ್ವರ ಸಮುದಾಯ ಭವನ ನಿರ್ಮಾಣ. | 20.00 |
| 3. | ಹಡಗಲಿ ಪಟ್ಟಣದಲ್ಲಿ ಶ್ರೀ ಅಂಬಿಗರ ಚೌಡಯ್ಯ ಸಮುದಾಯ ಭವನ ನಿರ್ಮಾಣ. | 25.00 |
| | ಒಟ್ಟು | **65.00** |

**ಷರತ್ತುಗಳು:**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017ರ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸತಕ್ಕದ್ದು, ಈ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು, ಪರಿಶೀಲಿಸಿ ಅನುದಾನವನ್ನು ಪಡೆಯಲು ಅರ್ಹತೆ ಇದ್ದಲ್ಲಿ ಮಾತ್ರ ಸಂಸ್ಥೆಗೆ ನಿಯಮಾನುಸಾರ ಹಾಗೂ ಅರ್ಹತೆಯನುಸಾರ ಅನುದಾನವನ್ನು ಮಾರ್ಗಸೂಚಿಗಳಂತೆ ಹಂತಹಂತವಾಗಿ ಬಿಡುಗಡೆ ಮಾಡತಕ್ಕದ್ದು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಅನುದಾನವನ್ನು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಬಿಡುಗಡೆ ಮಾಡುವಂತೆ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಜಿಲ್ಲಾಧಿಕಾರಿಗಳು, ವಿಜಯನಗರ ಜಿಲ್ಲೆ ಇವರ ಮುಖಾಂತರ ಪಡೆಯತಕ್ಕದ್ದು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವು ಪಾರದರ್ಶಕವಾಗಿ ಸದ್ಬಳಕೆ ಆಗುತ್ತಿರುವ ಬಗ್ಗೆ ಹಾಗೂ ಮಾರ್ಗಸೂಚಿಗಳಂತೆ ಬಳಕೆಯಾಗುತ್ತಿರುವ ಬಗ್ಗೆ ಪರಿಶೀಲಿಸಲು ಪ್ರತಿ ತಿಂಗಳು ಸಂಬಂಧಿತ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಇವರಿಂದ ನಿಗಧಿತ ನಮೂನೆಯಲ್ಲಿ ಭಾವಚಿತ್ರಗಳು ಹಾಗೂ ವರದಿಯನ್ನು ಪಡೆಯತಕ್ಕದ್ದು ಹಾಗೂ ವರದಿಯ ಆಧಾರದ ಮೇಲೆ ನಿಯಮಾನುಸಾರ ಅವಶ್ಯಕ ಕ್ರಮ ತೆಗೆದುಕೊಳ್ಳುವುದು.
4. ಯಾವ ಉದ್ದೇಶಕ್ಕೆ ಅನುದಾನ ನೀಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು. ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.
5. ಅನುದಾನವನ್ನು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸಿದ ನಂತರ ಬಿಡುಗಡೆ ಮಾಡುವುದು.
6. ಮಂಜೂರಾದ ಅನುದಾನವನ್ನು 2 ವರ್ಷಗಳೊಳಗಾಗಿ ಕಾಮಗಾರಿಗೆ ವಿನಿಯೋಗಿಸದಿದ್ದಲ್ಲಿ, ಸದರಿ ಅನುದಾನವನ್ನು ದಂಡ ಸಮೇತವಾಗಿ ಸರ್ಕಾರದಿಂದ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಸದರಿ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕಶೀರ್ಷಿಕೆ: 2225-03-001-0-05-103 ರಡಿ 2021-22ನೇ ಸಾಲಿನ ಪೂರಕ ಅಂದಾಜು-3 ರಲ್ಲಿ ಬಿಡುಗಡೆಯಾದ, ಪ್ರಸ್ತುತ ಬ್ಯಾಂಕ್ ಖಾತೆಯಲ್ಲಿ ಲಭ್ಯವಿರುವ ಅನುದಾನದಿಂದ ಭರಿಸತಕ್ಕದ್ದು.

.3...

28/10/22

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 523 ವೆಚ್ಚ-3/2022 ದಿನಾಂಕ:29.08.2022ರನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Sheenparveen 28/10/2022

(ಷಾಹೀನ್ ಪರ್ವೀನ್. ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನಸೌಧ, ಬೆಂಗಳೂರು.
4. ಜಿಲ್ಲಾಧಿಕಾರಿಗಳು ವಿಜಯನಗರ ಜಿಲ್ಲೆ, ವಿಜಯನಗರ.
5. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಜಯನಗರ ಜಿಲ್ಲೆ, ವಿಜಯನಗರ.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

<u>ಪ್ರತಿ:-</u>

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.